517 ಶ್ರೀ ದಿನಕರ ಕೇಶವ ಶೆಟ್ಟಿ (ಕುಮಟಾ): ಮಾನ್ಯ ಜೀವಿಶಾಸ್ತ್ರ, ಪರಿಸರ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಕುಮಟಾ ವಿಧಾನಸಭಾ ಕ್ಷೇತ್ರದ ಹೊನ್ನಾವರ ತಾಲ್ಲೂಕಿನ ಪಾವಿನಕುರ್ವಾ ಗ್ರಾಮವು ಸಮುದ್ರ ಕೊರೆತದಿಂದ ಹಾನಿಗೊಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಈ ಸಮುದ್ರ ಕೊರೆತವನ್ನು ಶಾಶ್ವತವಾಗಿ ತಡೆಯಲು ಕ್ರಮ ಕೈಗೊಳ್ಳಲಾಗುವುದೇ;

ಇ) ಹಾಗಿದ್ದಲ್ಲಿ, ಸಮುದ್ರ ಕೊರೆತವನ್ನು ತಡೆಯುವ ಕಾಮಗಾರಿಯನ್ನು ಯಾವಾಗಿನಿಂದ ಪ್ರಾರಂಭಿಸಲಾಗುವುದು;

ಈ) ಸಮುದ್ರ ಕೊರೆತ ತಡೆಯುವ ಕಾಮಗಾರಿಗಾಗಿ ನಿಗದಿಪಡಿಸಿರುವ ಅನುದಾನದ ಮೊತ್ತ ಎಷ್ಟು;

ಉ) ಈ ಸಮುದ್ರ ಕೊರೆತದಿಂದ ಸ್ಥಳೀಯರಿಗೆ ಆಗಿರುವ ನಷ್ಟವನ್ನು ಭರಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಊ) ಹಾಗಿದ್ದಲ್ಲಿ, ಪರಿಹಾರವನ್ನು ಯಾವಾಗ ನೀಡಲಾಗುವುದು; (ವಿವರ ನೀಡುವುದು)?

ಶ್ರೀ ಜೆ. ಕೃಷ್ಣ ಪಾಲೇಮಾರ್ (ಜೀವಿಶಾಸ್ತ್ರ, ಪರಿಸರ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು):

ಅ) ಹೌದು.

ಆ) ರಾಜ್ಯ ಸರ್ಕಾರದಿಂದ ಆಯವ್ಯಯದಲ್ಲಿ ಒದಗಿಸಲಾದ ಅನುದಾನಕ್ಕನುಗುಣವಾಗಿ ಅತೀ ತೀವ್ರವಾಗಿ ಕೊರೆತ ಉಂಟಾಗುವ ಪ್ರದೇಶಗಳಲ್ಲಿ ವಿನ್ಯಾಸದಂತೆ ತಡೆಗೋಡೆ ನಿರ್ಮಿಸಲಾಗುತ್ತಿದೆ.

ಇ) ರೂ. 40.00 ಲಕ್ಷಗಳ ಮೊತ್ತದ ಕಾಮಗಾರಿಯ ಟೆಂಡರ್ ಪ್ರಕ್ರಿಯೆ ಚಾಲನೆಯಲ್ಲಿದೆ. ಟೆಂಡರು ಪ್ರಕ್ರಿಯೆ ಪೂರ್ಣಗೊಳಿಸಿದ ನಂತರ ಕಾಮಗಾರಿ ಪ್ರಾರಂಭಿಸಲಾಗುವುದು.

ಈ) ಸಮುದ್ರ ಕೊರೆತ ಪ್ರತಿಬಂಧಕ ಕಾಮಗಾರಿಗಳಿಗಾಗಿ 2009–10ನೇ ಸಾಲಿಗೆ ರೂ. 786.99 ಲಕ್ಷ ಅನುದಾನ ಆಯವ್ಯಯದಲ್ಲಿ ಒದಗಿಸಲಾಗಿರುತ್ತದೆ.

ಉ) ಪಾವಿನಕುರ್ವಾ ಸಮುದ್ರ ಕೊರೆತದಿಂದ ಸ್ಥಳೀಯ ಜನರಿಗೆ ಹಾನಿಯಾದ ಬಗ್ಗೆ ವರದಿ ಇರುವುದಿಲ್ಲ. ಒಂದು ವೇಳೆ ಬೆಳೆ, ಜನ ಜಾನುವಾರುಗಳಿಗೆ ಹಾನಿ ಸಂಭವಿಸಿದಲ್ಲಿ ಸರ್ಕಾರದ ಮಾರ್ಗಸೂಚಿಯಂತೆ ಕಂದಾಯ ಇಲಾಖಾ ವತಿಯಿಂದ ಪರಿಹಾರ ನೀಡಲಾಗುವುದು.

ಊ) ಸಮುದ್ರ ಕೊರೆತದಿಂದ ಹಾನಿ ಸಂಭವಿಸಿದ ಸಂದರ್ಭದಲ್ಲಿ ವರದಿ ನೀಡಿದಲ್ಲಿ ಸಿ.ಆರ್.ಎಫ್. ಮಾರ್ಗಸೂಚಿಯಂತೆ ಕಂದಾಯ ಇಲಾಖಾ ವತಿಯಿಂದ ಪರಿಹಾರವನ್ನು ನೀಡಲಾಗುವುದು.

518 ಶ್ರೀ ಮಂಜು ಎ. (ಅರಕಲಗೂಡು): ಮಾನ್ಯ ತೋಟಗಾರಿಕೆ ಮತ್ತು ಬಂದೀಖಾನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಹಸಿಮೆಣಸು ಬೆಳೆಯುವ ರೈತರಿಗೆ ಅನುಕೂಲವಾಗಲು ಅರಕಲಗೂಡು ತಾಲ್ಲೂಕಿನಲ್ಲಿ ಶೀತಲಾಗಾರ ನಿರ್ಮಾಣ ಮಾಡುವ ಉದ್ದೇಶ ಸರ್ಕಾರಕ್ಕೆ ಇದೆಯೇ;

ಆ) ಹಾಗಿದ್ದಲ್ಲಿ, ಶೀತಲಾಗಾರವನ್ನು ಎಂದಿನಿಂದ ಪ್ರಾರಂಭ ಮಾಡಲಾಗುವುದು?

ಶ್ರೀ ಉಮೇಶ್ ವಿ. ಕತ್ತಿ (ತೋಟಗಾರಿಕೆ ಮತ್ತು ಬಂದೀಖಾನೆ ಸಚಿವರು):

ಅ) ಸರ್ಕಾರದ ವತಿಯಿಂದ ಶೀತಲಗೃಹಗಳನ್ನು ನಿರ್ಮಾಣ ಮಾಡುವ ಉದ್ದೇಶ ಇರುವುದಿಲ್ಲ. ಖಾಸಗಿ ಅಥವಾ ಸಹಕಾರಿ ವಲಯದಲ್ಲಿ ಶೀತಲಗೃಹಗಳನ್ನು ನಿರ್ಮಾಣ ಮಾಡಲು ಮುಂದೆ ಬರುವ ಆಸಕ್ತ